# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯಪ/ಕೊಉ/ಪಿಆರ್/03/2021-22

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 22.10.2021

**ದಿನಾಂಕ: 22.10.2021 ರಂದು ನಡೆದ ವಾರ್ಡ್ ನಂ.08 ಸಮಿತಿಯ ಸಭೆಯ ನಡವಳಿಗಳು:-**

ಸಭೆಗೆ ಹಾಜರಿದ್ದವರು:

- ಶ್ರೀ ಜಿ. ಶ್ರೀನಿವಾಸಮೂರ್ತಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳ ಪರವಾಗಿ
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಅರೋಗ್ಯ
- ಶ್ರೀ. ಡಾ॥ ದಯಾಕರ್ , ಆರೋಗ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಡಿಗೇಹಳ್ಳಿ.
- ಶ್ರೀ. ಬಸವರಾಜ್, ಕಂದಾಯ ನಿರೀಕ್ಷಕರು, ವಾರ್ಡ್ ಸಂಖ್ಯೆ:08 ಕೊಡಿಗೇಹಳ್ಳಿ
- ಶ್ರೀ ಬಾಬುರೆಡ್ಡಿ, ಸಹಾಯಕ ಅಭಿಯಂತರರು, ವಿದ್ಯುತ್ ವಿಭಾಗ, ಬಿಬಿಎಂಪಿ
- ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (**BWSSB**)
- ಶ್ರೀ ರಾಮಲಿಂಗೆಗೌಡ, ಎ.ಎಸ್.ಐ, ಹೆಬ್ಬಾಳ ಸಂಚಾರಿ ಪೊಲೀಸ್ ಠಾಣೆ.

**ವಾರ್ಡ್ ಸಮಿತಿ ಸದಸ್ಯರು**

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ಶ್ರೀಕಾಂತ್, ಆಮ್ಕೋ ಬಡಾವಣೆ, ಸದಸ್ಯರು
- ಶ್ರೀ ವೆಂಕಟಸ್ವಾಮಿ, ದೇವಿನಗರ, ಸದಸ್ಯರು
- ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು
- ಶ್ರೀ ಅಂತೋನಿ ದಾಸ್,ಸ್ಸಿ.ಕ್ಯೂ.ಎ.ಎಲ್. ಬಡಾವಣೆ, ಸದಸ್ಯರು
- ಶ್ರೀ ಜ್ಯೋತಿ ಸಿ ಅಚಾರ್ಯ, ಟಾಟಾನಗರ ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ನೋಡಲ್ ಅಧಿಕಾರಿ ರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ ಮತ್ತು ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು.

1. ಘನತ್ಯಾಜ್ಯ ನಿರ್ವಹಣೆ:
    1. ವಾರ್ಡ್ ವ್ಯಾಪ್ತಿಯ ರಸ್ತೆಯ ಬದಿಗಳಲ್ಲಿ ಕಸದ ರಾಶಿ ಕಾಣುತ್ತಿದ್ದು, ಸದರಿ ಗುತ್ತಿಗೆದಾರರು ಘನತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸುತ್ತಿರುವುದಿಲ್ಲ ಎಂದು ಸಮತಿ ಸದಸ್ಯರು ತಿಳಿಸಿರುತ್ತಾರೆ. ಇದಕ್ಕೆ ಸಹಾಯಕ ಕಾರ್ಯಪಾಲಕ ಅಭಿಯಂತರರು(ಘನತ್ಯಾಜ್ಯ) ರವರು ಮುಂದಿನ ಸಭೆಯಲ್ಲಿ ಸಮಜಾಯಷಿ ನೀಡಬೇಕೆಂದು ಸಮಿತಿ ಸದಸ್ಯರು ಮನವಿ ಮಾಡಿರುತ್ತಾರೆ.
    2. ಘನತ್ಯಾಜ್ಯ ನಿರ್ವಹಣೆ ವಿಭಾಗದ ಮೇಲಾಧಿಕಾರಿಗಳು ಮುಂದಿನ ಸಭೆಯಲ್ಲಿ ತಪ್ಪದೇ ಹಾಜರಾಗಬೇಕೆಂದು ಸಭೆಯಲ್ಲಿ ಹಾಜರಿದ್ದ ಸಮಿತಿ ಸದಸ್ಯರು ಮನವಿ ಮಾಡಿರುತ್ತಾರೆ.

2. ಆರೋಗ್ಯ ಇಲಾಖೆ:
    1. ಕೋವಿಡ್ 3ನೇ ಅಲೆ ಹರಡುವ ಸಾದ್ಯತೆಯಿದ್ದು, ಕೋವಿಡ್ ಸೋಂಕಿನ ಬಗ್ಗೆ ಎಚ್ಚರವಹಿಸಲು ಅಧಿಕಾರಿಗಳು ಸಮಿತಿ ಸದಸ್ಯರಿಗೆ ಮನದಟ್ಟು ಮಾಡಿರುತ್ತಾರೆ.
    2. ವಸತಿ ಸಮುಚ್ಚಯಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಪರಿಶೀಲಿಸಲು ನಿಯಮಿತ ತಪಾಸಣೆಯನ್ನು ಕೈಗೊಳ್ಳುವುದು.
    3. ಅಂಗಡಿಗಳ ಮಾಲೀಕರು ವ್ಯಾಪಾರ ಪರವಾನಿಗೆಯನ್ನು ಪಡೆಯದೇ ವ್ಯಾಪಾರ ಮಾಡುತ್ತಿರುವುವರ ವಿರುದ್ಧ ಕ್ರಮಕೈಗೊಳ್ಳುವುದು.
    4. ಪ್ಲಾಸ್ಟಿಕ್ ಬಳಕೆ ನಿಷೇದದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಮತ್ತು ಅಂಗಡಿಗಳಲ್ಲಿ ಪ್ಲಾಸ್ಟಿಕ್ ಬಳಕೆ ಕಂಡುಬಂದಲ್ಲಿ ಪ್ಲಾಸ್ಟಿಕ್ ಸೀಜ್ ಮಾಡುವ ಕೆಲಸವನ್ನು ವ್ಯಾಪಕವಾಗಿ ನಿರ್ವಹಿಸುವುದು.

3. ಕಾಮಗಾರಿ ವಿಭಾಗ:

1. ವಾರ್ಡ್‌ನಲ್ಲಿ ಕೆಲವು ಕಡೆ ಜರೂರಾಗಿ ಕಲವರ್ಟ್‌ಗಳ ನಿರ್ಮಾಣ ಕಾಮಗಾರಿಯನ್ನು ಮಾಡಿಕೊಡಬೇಕೆಂದು ತಿಳಿಸಿರುತ್ತಾರೆ.
2. ಅಶ್ವತಪ್ಪ ಬಡಾವಣೆಯ ಅಡ್ಡರಸ್ತೆಗಳಲ್ಲಿ ಚರಂಡಿಯನ್ನು ನಿರ್ಮಿಸಿಕೊಡಬೇಕೆಂದು ತಿಳಿಸಿರುತ್ತಾರೆ.
3. ಬಾಲಾಜಿ ಬಡಾವಣೆ ಮತ್ತು ಸುತ್ತಮುತ್ತಲಿನ ಜಾಗಗಳಲ್ಲಿ ಆರ್.ಸಿ.ಸಿ ರಸ್ತೆ ಮತ್ತು ಆರ್.ಸಿ.ಸಿ ಚರಂಡಿಗಳನ್ನು ನಿರ್ಮಿಸಿಕೊಡಬೇಕೆಂದು ತಿಳಿಸಿರುತ್ತಾರೆ.

4. ಕುಡಿಯುವ ನೀರಿನ ಸೌಲಭ್ಯಕ್ಕಾಗಿ ತುರ್ತು ಪರಿಸ್ಥಿತಿಯಲ್ಲಿ ಒಂದು ಬೋರ್‌ವೆಲ್ ಕೊರೆಸಲು ಅನುದಾನವನ್ನು ಕಾಯ್ದಿರಿಸಬೇಕೆಂದು ತಿಳಿಸಿರುತ್ತಾರೆ.

4. ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ:

   1. ಬೀದಿ ದೀಪಗಳ ನಿರ್ವಹಣೆ ಅತ್ಯಂತ ಪ್ರಮುಖವಾದ ಕೆಲಸವಾಗಿದ್ದು, ಬೀದಿ ದೀಪಗಳನ್ನು ಅದಷ್ಟು ಸುಸ್ಥಿತಿಯಲ್ಲಿಡುವುದು.
   2. ವಾರ್ಡ್ ವ್ಯಾಪ್ತಿಯಲ್ಲಿ ಆಳವಡಿಸಲಾಗಿರುವ ಎಲ್.ಇ.ಡಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವುದರ ಬಗ್ಗೆ ಕ್ರಮವಹಿಸುವುದು.

5. ಜಲಮಂಡಳಿ ವಿಭಾಗ:

   1. ರಸ್ತೆ ಡಾಂಬರೀಕರಣ ಮುಗಿದ ನಂತರ ಸ್ಯಾನಿಟರಿ ಚೇಂಬರ್‌ಗಳ ಮಟ್ಟವನ್ನು ರಸ್ತೆ ಮಟ್ಟಕ್ಕೆ ಸರಿಪಡಿಸುವುದು.
   2. ಕೊಡಿಗೇಹಳ್ಳಿ ರಸ್ತೆಯಲ್ಲಿ ನಿರ್ವಹಿಸಿರುವ ಒಳಚರಂಡಿ ಕಾಮಗಾರಿಯ ಇಳಿಜಾರು ಸರಿಯಿಲ್ಲದೆ ಇದ್ದು, ಇದನ್ನು ಕೂಡಲೇ ಪರಿಶೀಲಿಸಿ, ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿರುತ್ತಾರೆ.
   3. ತಮ್ಮ ಇಲಾಖೆ ವತಿಯಿಂದ ರಸ್ತೆ ಅಗೆದರೆ ಅದನ್ನು ನಿಯಾಮಾನುಸಾರ ಸರಿಪಡಿಸುವುದು.

ಅಂತಿಮವಾಗಿ ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

ಪ್ರತಿಯನ್ನು:-

1. ಮಾನ್ಯ ಆಡಳಿತ ಅಧಿಕಾರಿಗಳು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.

5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹ ತ್ ನೀರುಗಾಲುವೆ ರವರ ಮಾಹಿತಿಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
11. ಕಛೇರಿ ಕಡತಕ್ಕೆ.